# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತೊಂದನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಸೋಮವಾರ, ದಿನಾಂಕ:04ನೇ ಡಿಸೆಂಬರ್, 2023**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

### 01. ಸಂತಾಪ ಸೂಚನೆಗಳು

### 02. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

### 03. ಕಾರ್ಯದರ್ಶಿಯವರ ವರದಿ

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಕಾರ್ಯದರ್ಶಿಯವರು ಸಭೆಯಲ್ಲಿ ಮಂಡಿಸುವುದು.

### 04. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಮಾನ್ಯ ಸದಸ್ಯರುಗಳಿಗೆ ಈಗಾಗಲೇ ಒದಗಿಸಲಾಗಿರುವ ಒಂದನೇ ಮತ್ತು ಎರಡನೇ ಪಟ್ಟಿಯ ರೀತ್ಯಾ.

### 05. ಗಮನ ಸೆಳೆಯುವ ಸೂಚನೆಗಳು

01. **ಡಾ: ತಳವಾರ್ ಸಾಬಣ್ಣ** ಅವರು ಕಲ್ಯಾಣ ಕರ್ನಾಟಕ ಪ್ರಾದೇಶಿಕ ಅಭಿವೃದ್ಧಿ ಮಂಡಳಿಗೆ ಬಿಡುಗಡೆ ಮಾಡಿರುವ ಅನುದಾನದ ಅಪೂರ್ಣ ಬಳಕೆ ಮತ್ತು ಅವ್ಯವಹಾರಗಳನ್ನು ನಿಯಂತ್ರಿಸಲು ಕೈಗೊಂಡಿರುವ ಕ್ರಮಗಳ ಬಗ್ಗೆ ಮಾನ್ಯ ಯೋಜನಾ ಮತ್ತು ಸಾಂಖ್ಯಿಕ ಸಚಿವರ ಗಮನ ಸೆಳೆಯುವುದು.

.2..

02. **ಶ್ರೀ ಗೋವಿಂದರಾಜು** ಅವರು ಕೋಲಾರ ಜಿಲ್ಲೆಯ ಆರು ತಾಲ್ಲೂಕುಗಳಲ್ಲಿ ಬೆಳೆ ಹಾನಿ ಹಾಗೂ ಅದರಿಂದ ನಷ್ಟ ಉಂಟಾಗಿರುವ ಬಗ್ಗೆ ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು.

03. **ಶ್ರೀ ಪ್ರಕಾಶ್ ಕೆ. ರಾಥೋಡ್** ಅವರು ವಿಕಲಚೇತನರಿಗಾಗಿ ಪ್ರತ್ಯೇಕ ಐಟಿಐ ತರಬೇತಿ ಕೇಂದ್ರ ಮತ್ತು ಕಾಲೇಜುಗಳನ್ನು ತೆರೆಯುವ ಬಗ್ಗೆ ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖಾ ಸಚಿವರ ಗಮನ ಸೆಳೆಯುವುದು.

04. **ಶ್ರೀ ಮರಿತಿಬ್ಬೇಗೌಡ** ಅವರು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯಲ್ಲಿ ಹಿರಿಯ ಪ್ರಾಥಮಿಕ ಶಾಲೆಯಿಂದ ಪ್ರೌಢ ಶಾಲೆಗೆ ಹಾಗೂ ಪ್ರೌಢ ಶಾಲೆಯಿಂದ ಪದವಿ ಪೂರ್ವ ಕಾಲೇಜಿನ ಶಿಕ್ಷಕರುಗಳಿಗೆ ಬಡ್ತಿ ನೀಡುವಲ್ಲಿ ರೂಪಿಸಿರುವ ನಿಯಮಗಳಲ್ಲಿನ ತಾರತಮ್ಯದ ಬಗ್ಗೆ ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖಾ ಸಚಿವರ ಗಮನ ಸೆಳೆಯುವುದು.

## 06. ನಿಯಮ 330ರ ಮೇರೆಗೆ

01. **ಶ್ರೀಯುತರುಗಳಾದ ಮಧು ಜಿ. ಮಾದೇಗೌಡ, ಮರಿತಿಬ್ಬೇಗೌಡ, ಎಸ್.ಎಲ್. ಭೋಜೇಗೌಡ ಹಾಗೂ ಶಶೀಲ್ ಜಿ. ನಮೋಶಿ** ಅವರುಗಳು 2016ನೇ ಸಾಲಿನಿಂದ ಅನುದಾನಿತ ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ಬೋಧಕ/ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ಪ್ರಸ್ತಾಪಿಸುವುದು.

02. **ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ.** ಅವರು ಅರಣ್ಯ ಒತ್ತುವರಿ ಪ್ರಕರಣಗಳಿಗೆ ಅರಣ್ಯ ಹಾಗೂ ಕಂದಾಯ ಇಲಾಖೆಗಳು ಜಂಟಿ ಸರ್ವೆ ಮಾಡಿ ಪರಿಹಾರ ಸಿಗದಿರುವ ಕಾರಣ ಒತ್ತುವರಿದಾರರಿಗೆ ತೊಂದರೆಯಾಗಿರುವ ಕುರಿತು ಪ್ರಸ್ತಾಪಿಸುವುದು.

03. **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರು ಉತ್ತರ ಕರ್ನಾಟಕದಲ್ಲಿರುವ ನದಿಗಳ ನೀರನ್ನು ಸದ್ಬಳಕೆ ಮಾಡಿಕೊಳ್ಳುವ ನಿಟ್ಟಿನಲ್ಲಿ ನದಿಗಳ ಜೋಡಣೆ ಮುಖಾಂತರ ನೀರಾವರಿ ಯೋಜನೆಗಳನ್ನು ಜಾರಿಗೊಳಿಸುವ ಕುರಿತು ಪ್ರಸ್ತಾಪಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**